572 ಶ್ರೀ ಸುಭಾಷ್ ಜೋಷಿ (ನಿಪ್ಪಾಣಿ) :– ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರವು ಜಿಲ್ಲಾವಾರು ಮಟ್ಟದಲ್ಲಿ ಕಾರ್ಮಿಕ ನ್ಯಾಯಾಲಯಗಳನ್ನು ಸ್ಥಾಪಿಸುವ ಬಗ್ಗೆ ಯೋಚಿಸುತ್ತಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಸ್ಥಾಪಿಸಲಾಗುವುದು?

ಶ್ರೀ ಎ.ಎಸ್. ನಾಡಗೌಡ (ಕಾರ್ಮಿಕ ಮಂತ್ರಿಯವರು):–

ಅ) ಪ್ರತಿ ಜಿಲ್ಲೆಯಲ್ಲಿ ಒಂದು ಕಾರ್ಮಿಕ ನ್ಯಾಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಆ) ಪರಿಶೀಲಿಸಿ ತೀರ್ಮಾನಿಸಲಾಗುವುದು.

ಮಾಗಡಿ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸುವ ಬಗ್ಗೆ

635 ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನಲ್ಲಿ ಸಕಾಲಕ್ಕೆ ಸರಿಯಾಗಿ ಮಳೆ ಬಾರದೆ ರೈತರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ, ಈ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಲಾಗುವುದೆ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):–

ಅ) ಹೌದು.

ಆ) ಅಂತಹ ಪರಸ್ಥಿತಿ ಉಂಟಾಗಿರುವುದಿಲ್ಲ.

ಜಿಲ್ಲಾವಾರು ಬರಗಾಲ ಕಾಮಗಾರಿಗಳಿಗಾಗಿ ಹಣ ಖರ್ಚು ಮಾಡಿದ ಬಗ್ಗೆ

504. ಶ್ರೀ ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಾವ ಯಾವ ಜಿಲ್ಲೆಗೆ ಬರಗಾಲ ಕಾಮಗಾರಿಗಳ ಸಲುವಾಗಿ ಎಷ್ಟು ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ. (ಜಿಲ್ಲಾವಾರು ವಿವರ ಕೊಡಿರಿ)

ಆ) ಆ ಹಣವನ್ನು ಎಂದು ಬಿಡುಗಡೆ ಮಾಡಲಾಯಿತು?

ಇ) ತಾ. 15–10–90ರವರೆಗೆ ಖರ್ಚಾದ ಮೊತ್ತವೆಷ್ಟು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):–

ಅ) ಅನುಬಂಧದಲ್ಲಿ ನೀಡಿದೆ.

ಆ) 24–4–90, 14–5–90, 2–6–90, 15–6–90, 29–6–90, 2–7–90, 11–7–90, 18–7–90, 16–8–90, 20–8–90, 3–9–90, 7–9–90, 15–9–90, 21–9–90, 27–9–90, 5–10–90, 8–10–90, 11–10–90, 22–10–90, 8–11–90, 9–11–90, 26–11–90.

ಇ) ರೂ. 301.17 ಲಕ್ಷ.